**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿಸಿ ಸಂಖ್ಯೆ 2792/2025**

ಪಿರ್ಯಾದುದಾರರು : ಬಿಳಿಗೆರೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು:

ಶರತ್ ಕುಮಾರ್ ಟಿ ಎಸ್ ಬಿನ್ ಶಿವಕುಮಾರ ಟಿ ಆರ್ 32 ವರ್ಷ
ವಾಸ:ಹೊಸಕೋಟೆ ಗ್ರಾಮ, ನಂಜನಗೂಡು ತಾಲ್ಲೂಕು

*** *** ***

ಆಪಾದನೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿನಾಂಕ:09.08.2025 ರಂದು 21.00 ಗಂಟೆ ಸಮಯದಲ್ಲಿ ನಂಜನಗೂಡು ತಾಲ್ಲೂಕು ಬಿಳಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹೊಸಕೋಟೆ ಗ್ರಾಮದ ಶನಿಮಹಾತ್ಮ ದೇವಸ್ಥಾನದ ದಕ್ಷಿಣೋತ್ತರವಾಗಿ ಹಾದು ಹೋಗಿರುವ ಸುತ್ತೂರು - ಹೊಸಕೋಟೆ -ಮೈಸೂರು ರಸ್ತೆಯಲ್ಲಿ ಚಾಸಾ.2 ರವರು ಹೊಸಕೋಟೆ ಬಸ್ಸು ನಿಲ್ದಾಣದಿಂದ ತಮ್ಮ ಮನೆಗೆ ಹೋಗಲು ರಸ್ತೆಯ ಎಡಭಾಗದಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ, ಆರೋಪಿತರಾದ ನೀವು KA-09-ಹೆಚ್ ಜೆ-7554 ನಂಬರಿನ ಬಜಾಜ್ ಸಿ ಟಿ 100 ಬೈಕನ್ನು ಅತಿವೇಗವಾಗಿ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ.2 ರವರಿಗೆ

ಡಿಕ್ಕಿ ಮಾಡಿ ಅಪಘಾತಪಡಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ.2 ರವರು ಕೆಳಕ್ಕೆ ಬಿದ್ದಿದ್ದು, ಚಾಸಾ.2 ರವರ ಬಲಕಾಲಿಗೆ ಮತ್ತು ಹಣೆಗೆ ಪೆಟ್ಟಾಗಿ ತೀವ್ರ ಸ್ವರೂಪದ ಗಾಯವಾಗಿರುತ್ತದೆ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.125(ಬಿ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

1. **ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**
   **ಉಃ**

2. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**
   **ಉಃ**

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 04.02.2026 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.